ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರು ನಿಯಮ 72 ರಡಿ ನೀಡಿರುವ ಸೂಚನಾ ಪತ್ರಕ್ಕೆ ಸರ್ಕಾರದ ಉತ್ತರ

(51)

*ವಿಷಯ:-* "ಅನುದಾನಿತ ಶಾಲೆಗಳು ಹಾಗೂ ಕಾಲೇಜುಗಳಲ್ಲಿ (ಪದವಿ ಪೂರ್ವ ಹಾಗೂ ಪದವಿ ಕಾಲೇಗಳಲ್ಲಿ) 2015ನೇ ಸಾಲಿನವರೆಗೆ ನಿವೃತ್ತಿ, ರಾಜಿನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಸರ್ಕಾರ ಅನುಮತಿ ನೀಡಲಾಗಿತ್ತು, ಅದರಂತೆ ನಿಯಮಾನುಸಾರ ಎಲ್ಲಾ ಪ್ರಕ್ರಿಯೆಗಳನ್ನು ಮುಗಿಸಿ, ಅನುದಾನ ಮಂಜೂರಾತಿಗಾಗಿ ಸರ್ಕಾರದ ವಿವಿಧ ಹಂತಗಳಲ್ಲಿರುವ ಪ್ರಸ್ತಾವನೆಗಳಿಗೆ ಕೋವಿಡ್-19ರ ಹಿನ್ನಲೆಯಲ್ಲಿ ಆರ್ಥಿಕ ಮಿತವ್ಯಯದಿಂದಾಗಿ ಅನುಮೋದನೆ ದೊರಕದಿರುವುದರಿಂದ ಬಹಳಷ್ಟು ಮುಂದಿಗೆ ವೇತನ ಸಿಗುತ್ತಿಲ್ಲ ಹಾಗೂ ವಯೋಮಿತಿ ಮೀರುತ್ತಿದ್ದು, ತುಂಬಾ ತೊಂದರೆಯಲ್ಲಿರುವವುದರಿಂದ ಈ ಗಂಭೀರ ಸಮಸ್ಯೆ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯ ಬಯಸುತ್ತೇನೆ".

*ಉತ್ತರ:-* ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜ್ಯದಲ್ಲಿ ತೀವ್ರ ಆರ್ಥಿಕ ಸಂಕಷ್ಟ ಸೃಷ್ಟಿಯಾಗಿರುವ ಹಿನ್ನೆಲೆಯಲ್ಲಿ ಸುತ್ತೋಲೆ ಸಂಖ್ಯೆ:ಆಇ 157 ವೆಚ್ಚ-8 2020, ದಿನಾಂಕ:10.06.2020 ರನ್ವಯ ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಇತರೆ ಯಾವುದೇ ಕಾರಣಗಳಿಂದ ಖಾಲಿಯಾಗುವ ಹುದ್ದೆಗಳನ್ನು 2020-21ನೇ ಸಾಲಿನಲ್ಲಿ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆ ಹಾಗೂ ಸುತ್ತೋಲೆ ಸಂಖ್ಯೆ:ಆಇ 03 ಬಿಇಎಂ 2020, ದಿನಾಂಕ:06.07.2020 ರನ್ವಯ 2020-21ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳು ಮತ್ತು ಬ್ಯಾಕ್ ಲಾಗ್ ಹುದ್ದೆಗಳೂ ಸೇರಿದಂತೆ ರಾಜ್ಯ ಸಿವಿಲ್ ಸೇವೆಯಲ್ಲಿನ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಸಹ ಮುಂದಿನ ಆದೇಶದವರೆಗೆ ತಡೆಹಿಡಿಯಲಾಗಿದೆ.

ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗದಿಂದಾಗಿ ರಾಜಸ್ವ ಸಂಗ್ರಹಣೆಯಲ್ಲಿ ತೀವ್ರ ಕುಸಿತ ಉಂಟಾಗಿದೆ. ಆರ್ಥಿಕ ಸ್ಥಿತಿಯು ಸುಸ್ಥಿತಿಗೆ ಬಂದನಂತರ ಮುಂದಿನ ದಿನಗಳಲ್ಲಿ ಆರ್ಥಿಕ ಸಂಪನ್ಮೂಲವನ್ನು ಆಧರಿಸಿ ಈ ಆದೇಶವನ್ನು ಹಂತ ಹಂತವಾಗಿ ಹಿಂಪಡೆಯುವ ಬಗ್ಗೆ ಪರಿಶೀಲಿಸಲಾಗುವುದು.

ಸಂಖ್ಯೆ:ಆಇ 28 ವೆಚ್ಚ-8/2021

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ